epaper - karnatakamalla.com

ಕರ್ನಾಟಕ ಮಲ್ಲ



ಮಹಾರಾಷ್ಟ್ರದ ಜಲಗಾಂವ್ ಜಿಲ್ಲೆಯ 34 ವರ್ಷದ ಮಹಿಳೆಯೊಬ್ಬರು ವಲ್ಸಾಲ್ವಾ ಸೈನಸ್‌ನ ಮಲ್ಟಿಪಲ್ ಅನ್ಯೂರಿಸಂ ಎಂಬ ಗಂಭೀರ ಹೃದಯ ಕಾಯಿಲೆಯಿಂದ ಬಳಲುತ್ತಿದ್ದು, ಆಕೆಗೆ ಮುಂಬಯಿಯ ಲೀಲಾವತಿ ಆಸ್ಪತ್ರೆಯಲ್ಲಿ ಯಶಸ್ವಿಯಾಗಿ ಶಸ್ತ್ರ ಚಿಕಿತ್ಸೆ ನಡೆಸಲಾಗಿದೆ. ಲೀಲಾವತಿ ಆಸ್ಪತ್ರೆಯ ಹೃದಯರಕ್ತನಾಳದ ಶಸ್ತ್ರಚಿಕಿತ್ಸಕ ಡಾ.ಪವನ್ ಕುಮಾರ್ ನೇತೃತ್ವದಲ್ಲಿ ಹೃದ್ರೋಗ ತಜ್ಞ ಡಾ.ನಿತಿನ್ ಗೋಖಲೆ ಮತ್ತು ಹೃದಯ ಅರಿವಳಿಕೆ ತಜ್ಞ ಡಾ.ನಮ್ರತಾ ಕೊಠಾರಿ ಈ ಶಸ್ತ್ರಚಿಕಿತ್ಸೆ ನಡೆಸಿದ್ದಾರೆ. ಮುಂಬಯಿಯಲ್ಲಿ ಮೊದಲ ಬಾರಿಗೆ ಇಂತಹ ಶಸ್ತ್ರಚಿಕಿತ್ಸೆ ನಡೆದಿದೆ.